ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಬೀಡಿ ಕಾರ್ಮಿಕರ ಕನಿಷ್ಠ ವೇತನದ ಕುರಿತು ಮಾಹಿತಿ

ಶ್ರೀ ಕೆ.ಹರೀಶ್ ಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು):-

86 (117) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುಮಾರು 3 ಲಕ್ಷಕ್ಕೂ ಅಧಿಕ ಬೀಡಿ ಕಾರ್ಮಿಕರಿದ್ದು, ತಮ್ಮ ಜೀವನೋಪಾಯಕ್ಕೆ ಬೀಡಿ ಕಟ್ಟುವ ಕಾರ್ಯವನ್ನು ನಂಬಿಕೊಂಡಿರುತ್ತಾರೆ ; ಇವರಿಗೆ ಸರ್ಕಾರ ನಿಗದಿಪಡಿಸಿದ ಕನಿಷ್ಠ ಕೂಲಿ (Minimum wages act) ಯು ಕಾರ್ಮಿಕ ಕಾಯ್ದೆಗೆ ಅನುಗುಣವಾಗಿ ನಿಗದಿಗೊಳಿಸಲಾಗಿದೆಯೇ ; ಮತ್ತು ಕಾರ್ಯಗತಗೊಳಿಸಲಾಗಿದೆಯೇ ; ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳ ಕುರಿತು ಅಂಕಿ-ಅಂಶಗಳೊಂದಿಗೆ ವಿಸ್ತೃತ ಮಾಹಿತಿ ಒದಗಿಸುವುದು ;

(ಆ) ಬೀಡಿ ಕಾರ್ಮಿಕ ಕಂಪನಿಗಳು ಬೀಡಿ ಕಾರ್ಮಿಕರಿಗೆ ಕಾನೂನು ರೀತಿ ಸಿಗಬೇಕಾದ ಗ್ರಾಚ್ಯುಟಿ ಮತ್ತು ಇತರೆ ಮೊತ್ತವನ್ನು ಸಂದಾಯ ಮಾಡದೇ ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)